# ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ

**ಕೇಂದ್ರ ಕಛೇರಿ : ಕಲಬುರಗಿ**

ಸಂಖ್ಯೆ:ಕಕಸಾ/ಕೇಕ/ಸಿಬ್ಬಂದಿ/ಸಿ4/ವರ್ಗ/ಕ57/659/2022-23 ದಿನಾಂಕ: 09.07.2022

## -:: ಅಧಿಸೂಚನೆ ::-

ವಿಷಯ: **2022-23 ನೇ ಸಾಲಿನ ಆನ್-ಲೈನ್ ವರ್ಗಾವಣೆ ಕುರಿತು.**

ಉಲ್ಲೇಖ: 1) ಸುತ್ತೋಲೆ ಸಂಖ್ಯೆ 80/2021 ದಿನಾಂಕ 20.07.2021.

2). ಕಕಸಾ/ಕೇಕ/ಸಿಬ್ಬಂದಿ/ಸಿ4/ವರ್ಗ/ಕ57/633/2022-23 ದಿ:07.07.2022

**-**-**

ಕಕರಸಾ ನಿಗಮದ ವ್ಯಾಪ್ತಿಯೊಳಗೆ ದರ್ಜೆ-3 ಮೇಲ್ವಿಚಾರಕೇತರ ಮತ್ತು ದರ್ಜೆ-4 ರ ಸಿಬ್ಬಂದಿಗಳ ವರ್ಗಾವಣೆ ಕುರಿತು ಉಲ್ಲೇಖ (1)ರ ಸುತ್ತೋಲೆಯಲ್ಲಿನ ಮಾನದಂಡಗಳನುಸಾರ ಅರ್ಹ ಸಿಬ್ಬಂದಿಗಳಿಂದ 2022-23 ನೇ ಸಾಲಿನ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಉಪಯೋಗಿಸಬೇಕಾದ ವೆಬ್ ವಿಳಾಸ: www.kkrtc.org**

ವರ್ಗಾವಣೆ ಪ್ರಕ್ರಿಯೆಯ ಘಟನಾನುಕ್ರಮ (Calendar of Events). ಈ ಕೆಳಗಿನಂತಿರುತ್ತದೆ.

| ಕ್ರ. ಸಂ | ವರ್ಗಾವಣಾ ಚಟುವಟಿಕೆಗಳು (ವಿಭಾಗದ ಒಳಗೆ ಹಾಗೂ ಅಂತರ ವಿಭಾಗ) | ದಿನಾಂಕ | |
|---|---|---|---|
| | | ರಿಂದ | ವರೆಗೆ |
| 1 | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ. | 12.07.2022 | 27.07.2022 |
| 2 | ಸಂಬಂಧಿಸಿದ ವಿಭಾಗಮಟ್ಟದ ಸಿಬ್ಬಂದಿ ಶಾಖೆಯಿಂದ ಅರ್ಜಿಗಳನ್ನು ಪರಿಶೀಲಿಸಿ ಸರಿಯಾಗಿರುವ ಬಗ್ಗೆ ಹಾಗೂ ವ್ಯತ್ಯಾಸಗಳಿದ್ದಲ್ಲಿ ಸರಿಪಡಿಸಿ, ಅವಶ್ಯ ಸೇವಾ ವಿವರಗಳನ್ನು ಭರ್ತಿ ಮಾಡಲು. | 28.07.2022 | 06.08.2022 |
| 3 | ಗಣಕ ಇಲಾಖೆಯಿಂದ ವರ್ಗಾವಣೆಗೆ ಅರ್ಹರಿರುವ ಸಿಬ್ಬಂದಿಗಳ ಯೂನಿಟ್‌ವಾರು ಅರ್ಹತಾ ಪಟ್ಟಿಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು. | 08-08-2022 | 10-08-2022 |
| 4 | ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ ಅರ್ಹತಾ ಪಟ್ಟಿಗೆ ಅರ್ಜಿದಾರರು ಆಕ್ಷೇಪಣೆಗಳನ್ನು (ಇದ್ದಲ್ಲಿ) ಆಯಾ ಯೂನಿಟ್ ಮುಖ್ಯಸ್ಥರಿಗೆ ಸಲ್ಲಿಸಲು. | 11-08-2022 | 13-08-2022 |
| 5 | ಸಲ್ಲಿಕೆಯಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಸರಿಪಡಿಸಿದ ನಂತರ, ಅಂತರ ವಿಭಾಗ ವರ್ಗಾವಣಾ ಅರ್ಜಿಗಳೊಂದಿಗೆ ದೃಢೀಕೃತ ಪಟ್ಟಿಯನ್ನು ಆಯಾ ಇಲಾಖಾ ಮುಖ್ಯಸ್ಥರಿಗೆ ಹಾಗೂ ವಿಭಾಗದೊಳಗಿನ ವರ್ಗಾವಣಾ ಅರ್ಜಿಗಳೊಂದಿಗೆ ದೃಢೀಕೃತ ಪಟ್ಟಿಯನ್ನು ವಿಭಾಗದ ವರ್ಗಾವಣಾ ಸಮಿತಿಗೆ ಸಿಬ್ಬಂದಿ ಶಾಖೆಯಿಂದ ಸಲ್ಲಿಸಲು. | 16-08-2022 | 20-08-2022 |
| 6 | ಆಯಾ ವರ್ಗಾವಣಾ ಸಮಿತಿಗಳು ವರ್ಗಾವಣಾ ಆದೇಶಗಳನ್ನು ಹೊರಡಿಸಿ, ಕಡ್ಡಾಯವಾಗಿ ಅನುಸರಣಾ ವರದಿಯನ್ನು ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕೇಂದ್ರ ಕಛೇರಿ ಕಲಬುರಗಿ ರವರಿಗೆ ಸಲ್ಲಿಸಲು. | 21-08-2022 | 30-08-2022 |
| 7 | ವರ್ಗಾವಣೆಗೊಂಡ ಸಿಬ್ಬಂದಿಗಳನ್ನು ಬಿಡುಗಡೆಗೊಳಿಸಲು. | 01-09-2022 | 15-09-2022 |

2ನೇ ಪುಟಕ್ಕೆ ಮುಂದುವರೆದಿದೆ.....



Scanned with OKEN Scanner

ವರ್ಗಾವಣಾ ಅರ್ಜಿಯನ್ನು ಪರಿಗಣಿಸುವ ಕುರಿತು ನಿಗದಿತ ವರ್ಗಾವಣಾ ಸಮಿತಿಗಳ/ ಸಕ್ಷಮ ಪ್ರಾಧಿಕಾರಸ್ಥರ ತೀರ್ಮಾನವೇ ಅಂತಿಮವಾಗಿರುತ್ತದೆ. ಹುದ್ದೆವಾರು ಲಭ್ಯ ಖಾಲಿ ಸ್ಥಾನಗಳ ವಿವರಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲಾಗುವುದು. ಅಲ್ಲದೇ, ಹುದ್ದೆವಾರು ನಿಗಮದ ಸರಾಸರಿಗಿಂತ ಹೆಚ್ಚು ಕೊರತೆ ಇರುವಲ್ಲಿಗೆ ಮಾತ್ರ ವರ್ಗಾವಣಾ ಅರ್ಜಿಗಳನ್ನು ಪರಿಗಣಿಸಲಾಗುವುದು. ವರ್ಗಾವಣೆಗೆ ಅರ್ಜಿ ಸಲ್ಲಿಸಲು ಯಾವುದೇ ರೀತಿಯ ಅಡಚಣೆ ಉಂಟಾದಲ್ಲಿ, ಕೂಡಲೇ ಸಂಬಂಧಿಸಿದ ವಿಭಾಗದ ಆಡಳತಾಧಿಕಾರಿಗಳ ಗಮನಕ್ಕೆ ತರುವುದು.

ಮೇಲಿನ ಘಟನಾನುಕ್ರಮದಂತೆ ಯಾವುದೇ ದೂರಿಗೆ ಆಸ್ಪದವಾಗದಂತೆ ಆನ್‌ಲೈನ್ ವರ್ಗಾವಣಾ ಪ್ರಕ್ರಿಯೆಯನ್ನು ಕೈಗೊಂಡು ಮುಕ್ತಾಯಗೊಳಸಲು ಸೂಚಿಸಲಾಗಿದೆ.

9/7/22

ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿಯನ್ನು :</u>

- ✓ ಮುಖ್ಯ ಗಣಕ ವ್ಯವಸ್ಥಾಪಕರು, ಕಕರಸಾ ನಿಗಮ ರವರ ಮಾಹಿತಿಗಾಗಿ ಹಾಗೂ **ಮೇಲ್ಕಂಡ ಘಟನಾನುಕ್ರಮದಂತೆ ಆನ್‌ಲೈನ್ ಮೂಲಕ ವರ್ಗಾವಣೆ ಪ್ರಕ್ರಿಯೆ ಜರುಗಿಸುವುದಕ್ಕೆ ಪೂರಕವಾಗಿ ದಿನಾಂಕ 10.07.2022 ರೊಳಗಾಗಿ ತಂತ್ರಾಂಶಕ್ಕೆ ಸಂಬಂಧಪಟ್ಟ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಹಾಗೂ ಸದರಿ ಅಧಿಸೂಚನೆಯನ್ನು ಸಿಬ್ಬಂದಿಗಳ ಗಮನಕ್ಕಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.**
- ✓ ಎಲ್ಲಾ ಇಲಾಖಾ ಮುಖ್ಯಸ್ಥರು, ಕಕರಸಾ ನಿಗಮ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ✓ ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು/ ಪ್ರಾಂಶುಪಾಲರು/ ಕಾರ್ಯ ವ್ಯವಸ್ಥಾಪಕರು/ ಕಾರ್ಯ ನಿರ್ವಾಹಕ ಅಭಿಯಂತರರು, ಕಕರಸಾ ನಿಗಮ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ✓ ಮಾನ್ಯ ವ್ಯವಸ್ಥಾಪಕ ನಿರ್ದೇಶಕರ ಆಪ್ತ ಕಾರ್ಯದರ್ಶಿಗಳು, ಕಕರಸಾ ನಿಗಮ ರವರ ಮಾಹಿತಿಗಾಗಿ.



Scanned with OKEN Scanner